O.S. No.92/2019

PW1

**ದಿಃ 05-04-2022 ರಂದು ಸಾಕ್ಷಿಯನ್ನು ಪುನಃ ಕರೆಯಿಸಿ ಪ್ರಮಾಣೀಕರಿಸಲಾಯಿತು.**

**ಮುಖ್ಯ ವಿಚಾರಣೆಃ- ಶ್ರೀ ಜಿ ಬಿ ಎಂ ವಕೀಲರಿಂದಃ**

ನಾನು ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣ ಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದ ವಿಷಯಗಳು ಸತ್ಯವಾಗಿವೆ ಮತ್ತು ಪ್ರಮಾಣಪತ್ರದಲ್ಲಿರುವ ಸಹಿ ನನ್ನದೇ ಆಗಿರುತ್ತದೆ

ನನ್ನ ದತ್ತು ತಾಯಿಯಾದ ಬಸಮ್ಮನವರು ದಿಃ 10-11-1961 ರಂದು ನೊಂದಾಯಿತ ದಾನಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-1 ಎಂದು, ದಿಃ10-11-1964 ರಂದು ಬಸಮ್ಮ ಪ್ರತಿವಾದಿಯ ಪರವಾಗಿ ಬರೆದುಕೊಟ್ಟ ಮತ್ತೊಂದು ನೊಂದಾಯಿತ ದಾನಪತ್ರ ಹಾಜರುಪಡಿಸಿದ್ದು ಅದನ್ನು ನಿಪಿ-2 ಎಂದು, ದಾವಾ ಐಟಂ ನಂ.1 ಕ್ಕೆ ಸಂಬಂಧಪಟ್ಟಂತೆ ರಿವಿಜನ್ ಸೆಟ್ಲಮೆಂಟ್ ರಿಜಿಸ್ಟರ್ ಎಕ್ಸಟ್ರಾಕ್ಟನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-3 ಎಂದು, ರೀ ಸೆಟ್ಲಮೆಂಟ್ ರಿಜಿಸ್ಟರ್ ಎಕ್ಸಟ್ರಾಕ್ಟನ ದೃಢೀಕೃತ ನಕಲನ್ನು ಹಾಜರುಪಡಿಸಿದ್ದು ಅದನ್ನು ನಿಪಿ-4 ಎಂದು, ದಾವಾ ಐಟಂ ನಂ.1 ಕ್ಕೆ ಸಂಬಂಧಪಟ್ಟಂತೆ 1968-69 ರಿಂದ 1999-2000 ರವರೆಗಿನ ಕೈಬರಹದ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-5 ರಿಂದ 9 ಎಂದು, 2 ಗಣಕೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-10 ಮತ್ತು 11 ಎಂದು, ಮ್ಯುಟೇಶನ್ ಹಾಜರುಪಡಿಸಿದ್ದು ಅದನ್ನು ನಿಪಿ-12 ಎಂದು ಗುರುತಿಸಲಾಯಿತು. ರೀ ಸೆಟ್ಲಮೆಂಟ್ ರಿಜಿಸ್ಟರ್ ಎಕ್ಸಟ್ರಾಕ್ಟ ಪ್ರತಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ನಿಪಿ-13 ಮತ್ತು ನಿಪಿ-14 ಎಂದು, ಕೈಬರಹದ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-15 ರಿಂದ 19 ಎಂದು, 2 ಗಣಕೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-20 ಮತ್ತು 21 ಎಂದು, ಮ್ಯುಟೇಶನ್ ಹಾಜರುಪಡಿಸಿದ್ದು ಅದನ್ನು ನಿಪಿ-22 ಎಂದು ಗುರುತಿಸಲಾಯಿತು. ಕೈಬರಹದ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-23 ರಿಂದ 27 ಎಂದು, 2 ಗಣಕೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-28 ಮತ್ತು 29 ಎಂದು, ಕೈಬರಹದ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-30 ರಿಂದ 33 ಎಂದು, 2 ಗಣಕೀಕೃತ ಪಹಣಿಗಳನ್ನು ಹಾಜರುಪಡಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ-34 ಮತ್ತು 35 ಎಂದು, ಮ್ಯುಟೇಶನ್ ಪ್ರತಿ ಹಾಜರುಪಡಿಸಿದ್ದು ಅದನ್ನು ನಿಪಿ-36 ಎಂದು ಗುರುತಿಸಲಾಯಿತು.

**ಮುಂದುವರೆದ ಮುಖ್ಯ ವಿಚಾರಣೆಃ ವಾದಿಗಳ ಪರ ವಕೀಲರು ಹಾಜರಿದ್ದು ಮುಂದುವರೆದ ಮುಖ್ಯ ವಿಚಾರಣೆಗೆ ಕಾಲಾವಕಾಶ ಕೋರಿದರು ಅನುಮತಿಸಲಾಯಿತು.**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯಂತೆ ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಿಸಲಾಯಿತು)

ಓ.ಹೇ ಕೇ ಸರಿಯಿದೆ.

ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು

ಜೆ.ಎಂ.ಎಫ್.ಸಿ ನ್ಯಾಯಾಲಯ, ಹರಪನಹಳ್ಳಿ.